ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 24 ನೇ ಮಾರ್ಚ್, 2020

ಅಕ್ರಮ ಪಡಿತರ ಚೀಟಿ ಕುರಿತು

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ):-

233 (1834) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಪಡಿತರ ಚೀಟಿಗಳನ್ನು ಪಡೆದವರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಅಕ್ರಮ ದಾಖಲೆ ಮತ್ತು ಸುಳ್ಳು ಮಾಹಿತಿ ನೀಡಿ ಬಿ.ಪಿ.ಎಲ್. ಪಡಿತರ ಚೀಟಿ ಪಡೆದುಕೊಂಡವರ ಪತ್ತೆ ಹಚ್ಚುವ ಕಾರ್ಯವನ್ನು ಸರ್ಕಾರ ಮಾಡಿದೆಯೇ; ಮಾಡಿದ್ದಲ್ಲಿ, ಇಂತಹ ಎಷ್ಟು ಜನರು ಈ ರೀತಿ ಕಾನೂನು ಬಾಹಿರ ಬಿ.ಪಿ.ಎಲ್. ಕಾರ್ಡ್ ಪಡೆದಿರುತ್ತಾರೆ ;

(ಇ) ಇಲ್ಲಿಯವರೆಗೆ ಸರ್ಕಾರ ಎಷ್ಟು ಬಿ.ಪಿ.ಎಲ್. ಕಾರ್ಡ್‌ಗಳನ್ನು ವಾಪಸ್ ಪಡೆದುಕೊಂಡಿದೆ ; ಇದರಲ್ಲಿ ಭಾಗಿಗಳಾದಂತಹ ಅಧಿಕಾರಿಗಳು ಎಷ್ಟು ; ಮತ್ತು ಅವರ ಮೇಲೆ ಸರ್ಕಾರ ಏನು ಕ್ರಮ ಕೈಗೊಂಡಿದೆ ;

(ಈ) ಮುಂದಿನ ದಿನಗಳಲ್ಲಿ ಹೀಗಾಗದಂತೆ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದೇ?